## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಹೊಸದಾಗಿ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೃಜಿಸಿ ನೇಮಕಾತಿ ವಿಧಾನ ನಿರ್ದಿಷ್ಟಪಡಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 102 ವಿಇಎಲ್ 90, ದಿನಾಂಕ: 10.01.1994.
2. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಗ್ರಾಅಪ 67 ಗ್ರಾಪಂಸಿ 2006, ದಿನಾಂಕ: 04.01.2008.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 22 ಗ್ರಾಪಂಸಿ 2014, ದಿನಾಂಕ: 10.09.2014.

ಪ್ರಸ್ತಾವನೆ:

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 112 ರಡಿಯಲ್ಲಿ ಗ್ರಾಮ ಪಂಚಾಯಿತಿಗಳಿಗೆ ಸಿಬ್ಬಂದಿ ವರ್ಗದವರ ಮಾದರಿ, ವೇತನ ಶ್ರೇಣಿಗಳು ಮತ್ತು ನೇಮಕಾತಿ ನಿಯಮಗಳನ್ನು ಆದೇಶದ ಮೂಲಕ ನಿಗಧಿಪಡಿಸಲು ಸರ್ಕಾರಕ್ಕೆ ಅಧಿಕಾರವಿರುತ್ತದೆ. ಇದರನ್ವಯ ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಸರ್ಕಾರ ನಿಗಧಿಪಡಿಸಿದ್ದ ಗ್ರಾಮ ಪಂಚಾಯತಿ ಸಿಬ್ಬಂದಿಯ ಮಾದರಿಗೆ ಸಂಬಂಧಿಸಿದ ಆದೇಶವನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ನಮೂದಿಸಿರುವ ಅಧಿಕೃತ ಜ್ಞಾಪನದಲ್ಲಿ ಮಾರ್ಪಡಿಸಿ ಆದೇಶ ಹೊರಡಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2) ರಲ್ಲಿನ ಆದೇಶ ಮತ್ತು ಅಧಿಕೃತ ಜ್ಞಾಪನಗಳನ್ನು ಭಾಗಶಃ ಪರಿಷ್ಕರಿಸಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 112 ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಜ್ಯದಲ್ಲಿನ ಗ್ರಾಮ ಪಂಚಾಯುತಿಗಳ ಸಿಬ್ಬಂದಿ ಸ್ವರೂಪ, ವೇತನ ಮತ್ತು ನೇಮಕಾತಿ ವಿಧಾನವನ್ನು ಸರ್ಕಾರವು ನಿರ್ದಿಷ್ಟಪಡಿಸಿ ಆದೇಶಿಸಲಾಗಿದೆ.

ಗ್ರಾಮ ಪಂಚಾಯಿತಿಗಳಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಸ್ವಚ್ಚ ಭಾರತ್ ಮಿಷನ್, ವಸತಿ ಯೋಜನೆಗಳ ಪ್ರಗತಿ ದಾಖಲೀಕರಣ, ಪಡಿತರ ಚೀಟಿ ಕಾರ್ಯ, ನಾಗರೀಕರಿಗೆ ಒಂದೇ ಸೂರಿನಡಿ ಬಾಪೂಜಿ ಸೇವಾ ಕೇಂದ್ರದ ಮೂಲಕ ನೀಡುವ 100 ಸೇವೆಗಳ ಡಾಟಾ ಎಂಟ್ರಿ, ಆಧಾರ್ ಅಪ್‌ಡೇಶನ್ ಮತ್ತು ಇತರೆ ಇಲಾಖೆಗಳ ಮಾಹಿತಿ ತಂತ್ರಜ್ಞಾನಕ್ಕೆ ಸಂಬಂಧಿಸಿದ ಕೆಲಸ, ಇತ್ಯಾದಿ ಕಾರ್ಯಭಾರ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಹಾಲಿ ಇರುವ ಸಿಬ್ಬಂದಿ ವರ್ಗದ ಜೊತೆಗೆ ಹೊಸದಾಗಿ ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೃಜಿಸುವುದು ಅಗತ್ಯವೆಂದು ಮನಗಂಡು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ, 1993 ರ ಪ್ರಕರಣ 112 ರಡಿ ಸಿಬ್ಬಂದಿ ವರ್ಗದ ಮಾದರಿಯಲ್ಲಿ 'ಡಾಟಾ ಎಂಟ್ರಿ ಆಪರೇಟರ್' ಎಂಬ ಹುದ್ದೆಯನ್ನು ಸೃಜಿಸಿ, ಸದರಿ ಹುದ್ದೆಯನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ, 1993 ರ ಪ್ರಕರಣ 113 ರಂತೆ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಪೂರ್ವಾನುಮೋದನೆ ಪಡೆದು ಗ್ರಾಮ ಪಂಚಾಯಿತಿಗಳು ನೇಮಕಾತಿ ಮಾಡಿಕೊಳ್ಳಲು ನೇಮಕಾತಿ ವಿಧಾನವನ್ನು ನಿರ್ದಿಷ್ಟಪಡಿಸಲು ಸರ್ಕಾರವು ನಿರ್ಧರಿಸಿದೆ.

ಆದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 103 ಗ್ರಾಪಂಸಿ 2016, ಬೆಂಗಳೂರು. ದಿನಾಂಕ: 02-11-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 (ಕರ್ನಾಟಕ ಅಧಿನಿಯಮ 14/1993)ರ ಪ್ರಕರಣ 112 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ರಾಜ್ಯದಲ್ಲಿನ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ಸ್ವರೂಪ, ವೇತನ

ಶ್ರೇಣಿಗಳು ಮತ್ತು ನೇಮಕಾತಿ ವಿಧಾನದಲ್ಲಿ ರಾಜ್ಯದ ಪ್ರತಿ ಗ್ರಾಮ ಪಂಚಾಯತಿಗೆ ಹಾಲಿ ಇರುವ ಸಿಬ್ಬಂದಿ ವರ್ಗದ ಜೊತೆಗೆ ಹೊಸದಾಗಿ **"ಒಂದು ಡಾಟಾ ಎಂಟ್ರಿ ಆಪರೇಟರ್"** ಹುದ್ದೆಯನ್ನು ಸೃಜಿಸಿ ಸರ್ಕಾರವು ಆದೇಶಿಸಿದೆ.

**ನೇಮಕಾತಿ ವಿಧಾನ:-**

ರಾಜ್ಯದ ಪ್ರತಿ ಗ್ರಾಮ ಪಂಚಾಯಿತಿಯ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಂತೆ ನೇಮಕಾತಿ ಮಾಡಿಕೊಳ್ಳಲು ಈ ಕೆಳಕಂಡಂತೆ ನೇಮಕಾತಿ ವಿಧಾನವನ್ನು ನಿರ್ದಿಷ್ಟಪಡಿಸಿ ಆದೇಶಿಸಿದೆ.

**ನೇಮಕಾತಿಗೆ ಅರ್ಹತೆ:-**

| ಕ್ರ.ಸಂ. | ಸಿಬ್ಬಂದಿ ವರ್ಗ | ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ | ನೇಮಕಾತಿ ವಿಧಾನ |
|---|---|---|---|---|
| 1 | ಡಾಟಾ ಎಂಟ್ರಿ ಆಪರೇಟರ್ | 1 | 1. ಪಿ.ಯು.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.<br>2. ಕೇಂದ್ರ / ರಾಜ್ಯ ಸರ್ಕಾರಗಳಿಂದ ಮಾನ್ಯತೆ ಪಡೆದಿರುವ ತರಬೇತಿ ಸಂಸ್ಥೆಗಳಿಂದ ಕಂಪ್ಯೂಟರ್ ಬಳಕೆ (Computer Application) ಯಲ್ಲಿ ಕನಿಷ್ಠ 3 ತಿಂಗಳ ತರಬೇತಿ ಪಡೆದಿರಬೇಕು.<br>ಅಥವಾ<br>ಪಿ.ಯು.ಸಿ. / ತತ್ಸಮಾನ ಪರೀಕ್ಷೆ ಅಥವಾ ಮಾನ್ಯತೆ ಪಡೆದಿರುವ ವಿಶ್ವವಿದ್ಯಾಲಯಗಳಿಂದ ಪದವಿ / ಸ್ನಾತಕೋತ್ತರ ಪದವಿಗಳಲ್ಲಿ / ಡಿಪ್ಲೋಮೋದಲ್ಲಿ ಗಣಕಯಂತ್ರ ವಿಜ್ಞಾನವನ್ನು ಒಂದು ವಿಷಯವಾಗಿ ವ್ಯಾಸಂಗ ಮಾಡಿ ತೇರ್ಗಡೆಯಾಗಿರಬೇಕು.<br>3. ಗ್ರಾಮ ಪಂಚಾಯತಿಗಳಲ್ಲಿ ಪ್ರಸ್ತುತ ಡಾಟಾ ಎಂಟ್ರಿ ಆಪರೇಟರ್, ವಾಟರ್‌ಮೆನ್ / ಪಂಪ್ ಆಪರೇಟರ್ / ಪಂಪ್ ಮೆಕಾನಿಕ್, ಅಟೆಂಡರ್ ಮತ್ತು ಸ್ವಚ್ಛತಾಗಾರ ವೃಂದಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರು ಮೇಲೆ ಹೇಳಿದ ಅರ್ಹತೆ ಹೊಂದಿದ್ದು, ಈ ನೇಮಕಾತಿಗಾಗಿ ಅರ್ಜಿ ಸಲ್ಲಿಸಿದ್ದಲ್ಲಿ ಅವರು ಸಲ್ಲಿಸಿದ ಸೇವೆಯ ಪ್ರತಿ ಒಂದು ವರ್ಷಕ್ಕೆ 3 ರಷ್ಟು ಅಂಕಗಳ weightage ನೀಡುವುದು. | ನೇರ ನೇಮಕಾತಿ ಮೂಲಕ |

ಟಿಪ್ಪಣಿ: 1) ಪಿ.ಯು.ಸಿ. ತತ್ಸಮಾನ ಪರೀಕ್ಷೆಗೆ ಐ.ಟಿ.ಐ ಅಥವಾ 3 ವರ್ಷದ ಡಿಪ್ಲೋಮೊ ಕೋರ್ಸ್‌ನ್ನು ಮಾತ್ರ ಪರಿಗಣಿಸಲಾಗುವುದು.

2) ಮುಕ್ತ ವಿಶ್ವವಿದ್ಯಾಲಯಗಳು ನಡೆಸುವ 10+2 ಪರೀಕ್ಷೆಯನ್ನು ಸದರಿ ಹುದ್ದೆಗೆ ನಿಗದಿತ ವಿದ್ಯಾರ್ಹತೆ ಎಂದು ಪರಿಗಣಿಸಲಾಗುವುದಿಲ್ಲ.

<u>ವಯೋಮಿತಿ ಮತ್ತು ಇನ್ನಿತರ ಷರತ್ತುಗಳು:-</u> ಈ ನಿಯಮಗಳಡಿ ನೇಮಕಾತಿಗಾಗಿ ಈ ಕೆಳಕಂಡ ಷರತ್ತುಗಳನ್ನು ಪೂರೈಸಿರತಕ್ಕದ್ದು ಅಂದರೆ,-

ಅ) ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರನ್ವಯ ನಿರ್ದಿಷ್ಟಪಡಿಸಿದಂತೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು;

1) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ

2) ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ಅಭ್ಯರ್ಥಿಗಳು | ಗರಿಷ್ಠ ವಯೋಮಿತಿ |
|---|---|
| ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 35 ವರ್ಷ |
| ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | 38 ವರ್ಷ |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 ಅಭ್ಯರ್ಥಿಗಳಿಗೆ | 40 ವರ್ಷ |

ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ, ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ) ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವಂತೆ ಅಥವಾ Birth certificate issued by the competent authority ಯನ್ನು ಸಹ ಪರಿಗಣಿಸಲಾಗುವುದು.

ಆ) ಭಾರತದ ಪ್ರಜೆಯಾಗಿರಬೇಕು.

ಇ) ಮಾನಸಿಕವಾಗಿ ಹಾಗೂ ದೈಹಿಕವಾಗಿ ಆರೋಗ್ಯವಂತರಾಗಿರಬೇಕು.

<u>ಆಯ್ಕೆ ವಿಧಾನ:-</u>

1) ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯು ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳುವ ಬಗ್ಗೆ ತಾಲ್ಲೂಕು/ಜಿಲ್ಲೆಯಲ್ಲಿ ಹೆಚ್ಚಿನ ಪ್ರಸಾರವಿರುವ ಎರಡು ದಿನ ಪತ್ರಿಕೆ (ರಾಜ್ಯ ಮಟ್ಟದ ಒಂದು ಮತ್ತು ಸ್ಥಳೀಯ ಮಟ್ಟದ ಒಂದು) ಅವುಗಳಲ್ಲಿ ಒಂದು ಕನ್ನಡ ದಿನಪತ್ರಿಕೆಯಲ್ಲಾದರೂ ಜಾಹೀರಾತನ್ನು ನೀಡಿ ಅರ್ಜಿಗಳನ್ನು ಆಹ್ವಾನಿಸಬೇಕು. ಸಂಬಂಧಿಸಿದ ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಯ ಸೂಚನಾ ಫಲಕದಲ್ಲಿ ಈ ವಿಷಯವನ್ನು ಪ್ರಕಟಿಸಿರಬೇಕು.

2) ಅರ್ಹ ಅಭ್ಯರ್ಥಿಗಳು ಸಂಬಂಧಿಸಿದ ಗ್ರಾಮ ಪಂಚಾಯಿತಿಗೆ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಬೇಕು.

3) ಅಭ್ಯರ್ಥಿಗಳು ಅರ್ಜಿಯೊಡನೆ ರೂ.150/- ಗಳ ಡಿಡಿ/ಪೋಸ್ಟಲ್ ಆರ್ಡರ್‌ನ್ನು ಸಂಬಂಧಿಸಿದ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹೆಸರಿಗೆ ಪಡೆದು ಸಲ್ಲಿಸಬೇಕು. ಶುಲ್ಕವನ್ನು ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ.

4) ನಿಗದಿತ ಅವಧಿಯೊಳಗೆ ಸ್ವೀಕೃತವಾದ ಅರ್ಜಿಗಳನ್ನು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಪರಿಶೀಲಿಸಿ **ಪಿಯುಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಗಳನ್ನು ಮಾತ್ರ ಪರಿಗಣಿಸಿ ಮೆರಿಟ್ ಆಧಾರದ ಮೇಲೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯುವುದು.** ನೇಮಕಾತಿ ಮಾಡಬೇಕಾದ ಒಂದು ಹುದ್ದೆ ಮಾತ್ರ ಲಭ್ಯವಿರುವುದರಿಂದ ಮೀಸಲಾತಿ ಅನ್ವಯಿಸುವುದಿಲ್ಲ. **ಈ ಹುದ್ದೆಯ ಆಯ್ಕೆಗೆ ಯಾವುದೇ ರೀತಿಯ ಸಂದರ್ಶನವಿರುವುದಿಲ್ಲ.** ಗ್ರಾಮ ಪಂಚಾಯತಿಯಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟರ್, ವಾಟರ್‌ಮೆನ್ / ಪಂಪ್ ಆಪರೇಟರ್ / ಪಂಪ್ ಮೆಕಾನಿಕ್, ಅಟೆಂಡರ್ ಮತ್ತು ಸ್ವಚ್ಛತಾಗಾರ ವೃಂದದ ನೌಕರರು ಅರ್ಜಿ ಸಲ್ಲಿಸಿದಲ್ಲಿ ಅಭ್ಯರ್ಥಿಯ ಒಟ್ಟಾರೆ ಅಂಕಗಳಿಗೆ ಪ್ರತಿ ವರ್ಷ ಸಲ್ಲಿಸಿದ ಸೇವಾ ಅವಧಿಗೆ 3 ರಷ್ಟು weightage ಅಂಕಗಳನ್ನು ನೀಡುವುದು. ಉದಾಹರಣೆ: ಅಭ್ಯರ್ಥಿಯು ಪಿಯುಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ 300 ಅಂಕಗಳನ್ನು ಪಡೆದಿದ್ದರೆ ಒಂದು ವರ್ಷದ ಸೇವೆಗೆ 3 ಅಂಕಗಳನ್ನು ಸೇರಿಸಿದರೆ 303 ಒಟ್ಟು ಅಂಕಗಳಾಗುತ್ತವೆ.

5) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಮೆರಿಟ್ ಆಧಾರದ ಮೇಲೆ ಸಿದ್ಧಪಡಿಸಿದ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಗ್ರಾಮ ಪಂಚಾಯಿತಿಯ ಅನುಮೋದನೆ ಪಡೆದ ನಂತರ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಅನುಮೋದನೆಗಾಗಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗೆ ಸಲ್ಲಿಸತಕ್ಕದ್ದು.

6) ಸಂಬಂಧಿಸಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ, ಸಂಬಂಧಿಸಿದ ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಸಂಬಂಧಿತ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನೊಳಗೊಂಡ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರವರ ಅಧ್ಯಕ್ಷತೆಯ ಸಮಿತಿಯಲ್ಲಿ ಪರಿಶೀಲಿಸಿ ಮೆರಿಟ್ ಆಧಾರದ ಮೇಲೆ 1 ರಿಂದ 5 ರವರೆಗೆ ಅಭ್ಯರ್ಥಿಗಳನ್ನೊಳಗೊಂಡ ಅಂತಿಮ ಆಯ್ಕೆ ಪಟ್ಟಿ ಸಿದ್ಧಪಡಿಸಿ ಅನುಮೋದನೆ ನೀಡಬೇಕು.

7) ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯ ಅಧ್ಯಕ್ಷತೆಯ ಸಮಿತಿಯು ಅನುಮೋದನೆ ನೀಡಿದ ನಂತರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಅಂತಿಮ ಆಯ್ಕೆ ಪಟ್ಟಿಯ ಕ್ರಮ ಸಂಖ್ಯೆ 1 ರ ಅಭ್ಯರ್ಥಿಗೆ ನೇಮಕಾತಿ ಆದೇಶ ನೀಡಬೇಕು. ನೇಮಕಾತಿ ಆದೇಶ ನೀಡಿದ 15 ದಿನಗಳೊಳಗಾಗಿ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗಬೇಕು. ತಪ್ಪಿದಲ್ಲಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯ ಅನುಮತಿ ಪಡೆದು ಅಂತಿಮ ಆಯ್ಕೆ ಪಟ್ಟಿಯನುಸಾರ ನಂತರದ ಅಭ್ಯರ್ಥಿಗೆ ನೇಮಕಾತಿ ಆದೇಶ ನೀಡಬೇಕು. ಈ ಆಯ್ಕೆ ಪಟ್ಟಿಯು 6 ತಿಂಗಳವರೆಗೆ ಚಾಲ್ತಿಯಿರತಕ್ಕದ್ದು.

**8) ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯ ಸಮಿತಿ ಅನುಮೋದನೆ ಇಲ್ಲದೆ ಗ್ರಾಮ ಪಂಚಾಯಿತಿಯು ಮಾಡುವ ಯಾವುದೇ ನೇಮಕಾತಿಯು ಅಸಿಂಧುವಾಗುತ್ತದೆ. ಈ ರೀತಿ ನೇಮಕಾತಿ ಮಾಡಲು ಕಾರಣರಾದ ಸಂಬಂಧಿಸಿದ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮ ಜರುಗಿಸಲಾಗುವುದು.**

ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ನೇಮಕ ಹೊಂದುವ ನೌಕರರಿಗೆ ಪರೀಕ್ಷಾರ್ಥ ಅವಧಿ, ಶಿಸ್ತು ಪ್ರಾಧಿಕಾರ, ರಾಜ್ಯ ಕಾರ್ಮಿಕ ವಿಮಾ, ರಜಾ ಸೌಲಭ್ಯಗಳು, ನಿವೃತ್ತಿ ಸೌಲಭ್ಯ, ಮರಣೋತ್ತರ ಉಪದಾನಗಳು ಮತ್ತು ಇನ್ನುಳಿದ ವಿಷಯಗಳು ದಿನಾಂಕ:04-01-2008ರ ಸರ್ಕಾರದ ಅಧಿಕೃತ ಜ್ಞಾಪನ ಮತ್ತು ದಿನಾಂಕ: 10-09-2014 ರ ಸರ್ಕಾರದ ಆದೇಶದಲ್ಲಿರುವಂತೆ ಅನ್ವಯವಾಗುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: FD 265 Exp-6/2017, ದಿನಾಂಕ: 21-06-2017 ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

9/11/2017

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿ:

1. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
2. ಎಲ್ಲಾ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು,
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ರವರ ಆಪ್ತ ಕಾರ್ಯದರ್ಶಿ.
8. ವಿಶೇಷ ಅಧಿಕಾರಿ, (ಜಿ.ಪಂ.) ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
9. ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು / ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
10. ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿ/ನೌಕರರ ಸಂಘ (ರಿ), ಗಾಂಧಿನಗರ, ಬೆಂಗಳೂರು.
11. ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘ (ಸಿ.ಐ.ಟಿ.ಯು), ಸಂಪಂಗಿರಾಮನಗರ, ಬೆಂಗಳೂರು.
12. ಕಾರ್ಯಾಧ್ಯಕ್ಷರು, ಕರ್ನಾಟಕ ಪಂಚಾಯತ್ ಪರಿಷತ್, ನಂ.186/6, ಶಿರೂರು ಪಾರ್ಕ್ ರಸ್ತೆ, ನಟರಾಜ ಟಾಕೀಸ್ ಎದುರು, ಶೇಷಾದ್ರಿಪುರಂ, ಬೆಂಗಳೂರು-560020.
13. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
14. ಮಾಹಿತಿ ಕೇಂದ್ರ/ಇಲಾಖಾ ವೆಬ್‌ಸೈಟ್.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.